# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

### ವಾರ್ಡ್ ನಂ.71 : ಹೆಗ್ಗನಹಳ್ಳಿ

**ದಿನಾಂಕ: 08.03.2021 ರಂದು ಬೆಳಿಗ್ಗೆ 11.00 ಗಂಟೆಗೆ ಶ್ರೀ ಬಿ.ಆರ್ ರವಿಕುಮಾರ್ ನೋಡಲ್ ಅಧಿಕಾರಿ, ವಾರ್ಡ್ 71 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

**ಸಭೆಯಲ್ಲಿ ಹಾಜರಿದ್ದವರು:**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಬಿ.ಆರ್ ರವಿಕುಮಾರ್ | ನೋಡಲ್ ಅಧಿಕಾರಿ–ವಾರ್ಡ್ ನಂ.71, ಸಹಾಯಕ ನಿರ್ದೇಶಕರು (ಪಶುಪಾಲನೆ) |
| 2 | ಶ್ರೀ ಮಂಜುನಾಥ್ ಡಿ ಎಸ್ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 71 |
| 3 | ಚಂದ್ರ ಜೆ | ಮಾರ್ಷಲ್ ವಾರ್ಡ್ 71 |
| 4 | ವಿಠಲ್ ರಾವ್ | ಕೆ.ಇ.ಬಿ |
| 5 | ವೆಂಕಟರಾಜು | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ (ಹೆಗ್ಗನಹಳ್ಳಿ ನಾಗರೀಕರ ಹಿತ ರಕ್ಷಣಾ ವೇದಿಕೆ) |
| 6 | ಸುರೇಶ್ ಎಂ | ಕಿರಿಯ ಆರೋಗ್ಯ ಪರಿವೀಕ್ಷಕರು |
| 7 | ಮಂಜುನಾಥ್ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |

**:ನಡಾವಳಿಯ ವರದಿ:**

➢ ಕಾರ್ಯದರ್ಶಿಗಳಾದ ಶ್ರೀ ಡಿ.ಎಸ್.ಮಂಜುನಾಥ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

*****

- ಶ್ರೀ ಬಿ.ಆರ್ ರವಿಕುಮಾರ್, ನೋಡಲ್ ಅಧಿಕಾರಿ–ವಾರ್ಡ್ ನಂ.71, ರವರು ಕೋವಿಡ್–19 ಸಾಂಕ್ರಾಮಿಕ ರೋಗವು 2ನೇ ಹಂತದಲ್ಲಿ ಪ್ರಸಸರಿಸುತ್ತಿದ್ದು, ಇದನ್ನು ತಡೆಗಟ್ಟುವ ಬಗ್ಗೆ ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚಿನ ಪರೀಕ್ಷೆ ನಡೆಸಲು ಸೂಚಿಸಿದರು ಹಾಗೂ ಮಾಸ್ಕ್ ಧರಿಸುವ ಮತ್ತು ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಬಗ್ಗೆ ಧ್ವನಿವರ್ಧಕಗಳಲ್ಲಿ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲು ಸೂಚಿಸಿದರು.

- ಶ್ರೀ ವೆಂಕಟರಾಜು, ಆದ್ಯಕ್ಷರು, (ಹೆಗ್ಗನಹಳ್ಳಿ ನಾಗರೀಕರ ಹಿತ ರಕ್ಷಣಾ ವೇದಿಕೆ) ರವರು ಹೊಯ್ಸಳನಗರದಲ್ಲಿ ರಸ್ತೆಗುಂಡಿಗಳು ಬಿದ್ದಿರುವುದರಿಂದ ವಾಹನ ಸವಾರರಿಗೆ ತುಂಬಾ ತೊಂದರೆಯಾಗುತ್ತಿದೆ. ಈ ಬಗ್ಗೆ ಕ್ರಮ ವಹಿಸಲು ಕೋರಿದರು.

- ಇದಕ್ಕೆ ಪ್ರತಿಕ್ರಿಯಿಸಿದ ಸಹಾಯಕ ಅಭಿಯಂತರರಾದ ಶ್ರೀ ಮಂಜುನಾಥ್ ಡಿ ಎಸ್ ರವರು ಮಾತನಾಡಿ ಈಗಾಗಲೇ ವಾರ್ಡ್ ಅನುದಾನದಲ್ಲಿ ಹೊಯ್ಸಳನಗರದಲ್ಲಿ ರಸ್ತೆಗುಂಡಿಗಳಿಗೆ ವೆಟ್ ಮಿಕ್ಸ್ ಹಾಕಲಾಗಿದ್ದು, 4–5 ದಿನಗಳಲ್ಲಿ ಮುಚ್ಚುವುದಾಗೀ ತಿಳಿಸಿದರು.

- ಶ್ರೀ ವೆಂಕಟರಾಜು, ಆದ್ಯಕ್ಷರು, (ಹೆಗ್ಗನಹಳ್ಳಿ ನಾಗರೀಕರ ಹಿತ ರಕ್ಷಣಾ ವೇದಿಕೆ) ರವರು ಹೊಯ್ಸಳನಗರದ ನಾಲ್ಕು ಕಡೆಗಳಲ್ಲಿ ಬೀದಿದೀಪಗಳು ಉರಿಯುತ್ತಿರುವುದಿಲ್ಲ. ಇವುಗಳನ್ನು ದುರಸ್ತಿಪಡಿಸಲು ಕೋರಿದರು.

  - ಇದಕ್ಕೆ ಪ್ರತಿಕ್ರಿಯಿಸಿದ ಬೀದಿದೀಪಗಳ ನಿರ್ವಹಣೆಯ ಗುತ್ತಿಗೆದಾರರರಾದ ಶ್ರೀ ಚೇತನ್, ರವರು ಸಭೆ ಮುಗಿದ ನಂತರ ತಮ್ಮನ್ನು ಭೇಟಿ ಮಾಡಿ, ಜಾಗಗಳನ್ನು ಪರಿಶೀಲಿಸಿ ದುರಸ್ತಿಪಡಿಸಲಾಗುವುದೆಂದು ತಿಳಿಸಿದರು.

- ಶ್ರೀ ಸುರೇಶ್ ಎಂ, ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ನಂ.71 ಮಾತನಾಡಿ 01-11-2020ರಿಂದ ಆಟೋಗಳಿಗೆ ಜಿ.ಪಿ.ಎಸ್ ಅಳವಡಿಸಲಾಗಿದ್ದು, ಬಾರದಿದ್ದ ಪಕ್ಷದಲ್ಲಿ ನಮ್ಮ ಗಮನಕ್ಕೆ ತರಲು ಕೋರಿ ಅಂತಹವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ಸಭೆಗೆ ತಿಳಿಸಿದರು.

- ಶ್ರೀ ಬಿ.ಆರ್ ರವಿಕುಮಾರ್, ನೋಡಲ್ ಅಧಿಕಾರಿ–ವಾರ್ಡ್ ನಂ.71, ಮಾತನಾಡಿ ಸ್ವಚ್ಛ ಸರ್ವೇಕ್ಷಣ ಅಭಿಯಾನ 2021 ರ ಬಗ್ಗೆ ಮಾತನಾಡಿ ಬೆಂಗಳೂರು ನಗರಕ್ಕೆ ವೋಟ್ ಮಾಡಿ, ರೇಟಿಂಗ್ ನೀಡುವಂತೆ ಕೋರಿದರು. ಅದಕ್ಕೆ ಸಂಬಂಧಿಸಿದ App and Website link ಗಳನ್ನು ಸಭೆಗೆ ನೀಡಿದರು.

- ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡಿನ ಕುಂದುಕೊರತೆಗಳತ್ತ ಗಮನಹರಿಸಿ ವಾರ್ಡ್ ಅಭಿವೃದ್ಧಿ ಪಡಿಸಲು ಸಹಕಾರ ನೀಡಬೇಕೆಂದು ಮನವಿ ಮಾಡಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಡಿ.ಎಸ್.ಮಂಜುನಾಥ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ–ವಾರ್ಡ್ 71 ಹಾಗೂ**
**ಸಹಾಯಕ ಅಭಿಯಂತರರು,**

**(ಬಿ.ಆರ್ ರವಿಕುಮಾರ್)**
**ನೋಡಲ್ ಅಧಿಕಾರಿ ವಾರ್ಡ್–71**

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರರವರ ಆದ್ಯ ಗಮನಕ್ಕೆ ತರಲಾಗಿದೆ.
2) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
4) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.71 ರವರ ಮಾಹಿತಿಗಾಗಿ
7) ಸಹಾಯಕ ಅಭಿಯಂತರರು (ವಿದ್ಯುತ್ ಬೆಸ್ಕಾಂ) ರವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
8) ಸಹಾಯಕ ಅಭಿಯಂತರರು (ವಿದ್ಯುತ್ (ಬೀದಿದೀಪ) ಬಿಬಿಎಂಪಿ ರವರ ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ
9) ಕಛೇರಿ ಕಡತಕ್ಕೆ